Rotary

# JASMINE

ಜಾಸ್ಮಿನ್ | जास्मिन

UNITE FOR GOOD

WEEKLY BULLETIN OF ROTARY CLUB KUNDAPURA SOUTH

Charter No. 23496 | Zone 1, R. I. Dist. 3182 | Charter Date : 04-03-1986




$40^{h}$ year of Service and Fellowship



Rtn. Francesco Arezzo
RI President




Rtn. Palaksha K.
Dist. Governor



Rtn. PHF. I. Narayana
Asst. Governor



Rtn. Koushik Yadiyal
Zonal Lieutenant



Rtn. Sachin Nackathaya
President



Rtn. Gerald Crasto
Secretary



Rtn. Ramananda Karanth
Bulletin Editor

We meet every Thursday at 7-30 p.m.
at Sarojini Madhusoodhan D. Kushe Rotary South Hall, Kundapura

Volume 40 Issue - 26 1st January 2026

## Classification Talk

ಸಾರ್ವಜನಿಕ ಸಾರಿಗೆ ಕ್ಷೇತ್ರದಲ್ಲಿ
ಬಸ್ ಮಾಲೀಕರಿಗೆ ಎದುರಾಗುವ ಸವಾಲುಗಳು
ಹಾಗೂ ಮಾರ್ಗೋಪಾಯಗಳು

by **Rtn. Suprith Chatra**

Time : 7.00 p.m.
Venue : Akshatha Hall, Hotel Hariprasad Hall, Kundapura

## ಸಂಪಾದಕೀಯ :



**ನನ್ನ ಒಲವಿನ ರೋಟರಿ ಮಿತ್ರರೇ,**

ಕ್ಷಮೆ, ಪ್ರೀತಿ, ದಯೆ, ಕರುಣೆ ಹಾಗೂ ಸ್ನೇಹ ಬಾಂಧವ್ಯಕ್ಕೆ ಜಗತ್ತಿನಲ್ಲೇ ಒಂದು ಹೊಸ ಯುಗವನ್ನೇ ಸೃಷ್ಟಿಸಿದ ಅವತಾರ ಏಸು ಕ್ರಿಸ್ತರ ಜನ್ಮ ದಿನ ಡಿಸೆಂಬರ್ 25 ರ ಪ್ರಯುಕ್ತ ಹಾಗೂ ಹೊಸ ವರುಷ 2026 ರ ಹೃತ್ಪೂರ್ವಕ ಶುಭಾಷಯಗಳು. ಪವಿತ್ರಾತ್ಮ ಕ್ರಿಸ್ತರು ಬೋಧಿಸಿದ ಕ್ಷಮೆ, ಪ್ರೀತಿ, ಪರಸ್ಪರ ಸ್ನೇಹ ಬಾಂಧವ್ಯಗಳನ್ನು ನಮ್ಮ ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಮ್ಮ ಬದುಕನ್ನು ಇನ್ನಷ್ಟು ಸುಮಧುರವಾಗಿ ನಡೆಸೋಣ ಎಂಬ ಹಾರೈಕೆ ಹಾಗೂ ಇದೇ ವಿಚಾರಗಳನ್ನು ಪ್ರಪಂಚದಲ್ಲಿರುವ ಎಲ್ಲಾ ದೇಶಗಳ ನಾಯಕರು ಒಮ್ಮೆ ಜ್ಞಾಪಿಸಿಕೊಂಡು ಅಳವಡಿಸಿಕೊಂಡಲ್ಲಿ ಜಗತ್ತಿನಲ್ಲಿ ಯುದ್ಧಗಳೇ ಇರುವುದಿಲ್ಲ. ಬಸವಣ್ಣನವರ ವಚನ ಹಾಗೂ ಪೂಜ್ಯ ಕ್ರಿಸ್ತರ ಬೋಧನೆಗಳು ಒಂದೇ ರೀತಿ. “ಅಯ್ಯಾ ಎಂದರೆ ಸ್ವರ್ಗ, ಎಲವೋ ಎಂದರೆ ನರಕ”, “ದಯೆಯೇ ಧರ್ಮದ ಮೂಲವಯ್ಯ” ಎಂಥಹ ಸಂದೇಶ!. ಮಿತ್ರರೇ, ಬರುವ ಹೊಸವರುಷ ಯಾವುದೇ ಸಾಂಕ್ರಾಮಿಕ ಖಾಯಿಲೆಗಳು ಆವರಿಸದೇ ಇರಲಿ, ಯುದ್ಧ ಭೀತಿಗಳು ಇಲ್ಲದೇ ಪ್ರಪಂಚಕ್ಕೆ ಸುಖ ಶಾತಿ ನೆಮ್ಮದಿ ನೀಡಿ ಆ ದೇವರು ಆಶೀರ್ವದಿಸಲಿ ಎಂದು ಹಾರೈಸುತ್ತೇನೆ. ಮತ್ತೊಮ್ಮೆ ನಮ್ಮ ರೋಟರಿ ಕ್ಲಬ್ ಕುಂದಾಪುರ ದಕ್ಷಿಣದ ಸದಸ್ಯರು ಹಾಗೂ ಅವರ ಕುಟುಂಬಸ್ಥರಿಗೆ “Happy Christmas and Happy New Year 2026”

– **ರೊ. ರಮಾನಂದ ಕಾರಂತ್**

---

## ವಾರದ ಸಭೆಯ ವರದಿ




ತಾ|25/12/2025 ರಂದು ನಡೆದ ನಮ್ಮ ವಾರದ ಸಭೆಯು ಕ್ಲಬ್ ಅಸ್ಸೆಂಬ್ಲಿ ಆಗಿದ್ದು, ರೊ. ಶ್ರೀನಿವಾಸ ಶೇಟ್ ಪ್ರಾರ್ಥನೆ ನೆರವೇರಿಸಿದರು. ಆಗಮಿಸಿದ ಸದಸ್ಯರುಗಳನ್ನು ಅಧ್ಯಕ್ಷ ರೊ. ಸಚಿನ್ ನಕ್ಕತ್ತಾಯ ಸ್ವಾಗತಿಸಿದರು. ರೊ. ಕೆ.ಕೆ. ಕಾಂಚನ್ ವಾರದ ವರದಿ ವಾಚಿಸಿದರು. ರೊ. ಕೆ.ಕೆ. ಕಾಂಚನ್ ರೋಟರಿ ಮಾಹಿತಿ ನೀಡಿದರು. ರೊ. ಸೀತಾರಾಮ ನಕ್ಕತ್ತಾಯ ವಾರದ ಚಿಂತನೆ ಮಂಡಿಸಿದರು. ರೊ. ಮನೋಹರ್ ಭಟ್ ವಂದನಾರ್ಪಣೆ ಮಾಡಿದರು. ಸಭೆಯಲ್ಲಿ ಸದಸ್ಯರಿಗಾಗಿ ರೋಟರಿ ಕ್ವಿಝ್ ಅನ್ನು ರೊ. ಕೆ. ಕೆ. ಕಾಂಚನ್ ನಡೆಸಿಕೊಟ್ಟರು. ಕಾರ್ಯಕ್ರಮದ ಕೊನೆಯಲ್ಲಿನ ಹಾಸ್ಯವನ್ನು ರೊ. ಮಹೇಂದ್ರ ಶೆಟ್ಟಿ ನಡೆಸಿಕೊಟ್ಟರು.

---





ರೋಟರಿ ಕ್ಲಬ್ ಕುಂದಾಪುರ ದಕ್ಷಿಣ ಹಾಗೂ ಕೋಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ದಿನಾಂಕ 21, ಡಿಸೆಂಬರ್ 2025ರ ಭಾನುವಾರದಂದು "ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನ"ವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು. ಕ್ಲಬ್‌ನ ವ್ಯಾಪ್ತಿಗೆ ಒಳಪಡುವ 4 ಬೂತ್‌ಗಳಲ್ಲಿ ಪೋಲಿಯೋ ಲಸಿಕೆ ನೀಡುವ ವ್ಯವಸ್ಥೆಯನ್ನು ಮಾಡಲಾಗಿದ್ದು, ಸುಮಾರು 200ಕ್ಕೂ ಹೆಚ್ಚು ಮಕ್ಕಳು ಇದರ ಸದುಪಯೋಗ ಪಡೆದುಕೊಂಡರು. ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಕುಂದಾಪುರ ದಕ್ಷಿಣದ ಅಧ್ಯಕ್ಷರಾದ ರೊ. ಸಚಿನ್ ನಕ್ಕತ್ತಾಯ, ಕಾರ್ಯದರ್ಶಿಗಳಾದ ರೊ. ಜೆರಾಲ್ಡ್ ಕ್ರಾಸ್ತಾ ಹಾಗೂ ಕ್ಲಬ್ ಬುಲೆಟಿನ್ ‘ಜಾಸ್ಮಿನ್’ ಸಂಪಾದಕರಾದ ರೊ. ರಮಾನಂದ ಕಾರಂತ ಅವರು ಉಪಸ್ಥಿತರಿದ್ದು, ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ, ಪೋಲಿಯೋ ನಿರ್ಮೂಲನಾ ಕಾರ್ಯದಲ್ಲಿ ತಮ್ಮನ್ನು ತೊಡಗಿಸಿಕೊಂಡ ಸುಮಾರು 80 ಮಂದಿ ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗೂ ಆರೋಗ್ಯ ಸಿಬ್ಬಂದಿಗೆ ರೋಟರಿ ಕ್ಲಬ್ ವತಿಯಿಂದ ಬೆಳಗಿನ ಉಪಹಾರವನ್ನು ವಿತರಿಸಲಾಯಿತು. ಸಮಾಜದ ಸ್ವಾಸ್ಥ್ಯ ಕಾಪಾಡುವ ನಿಟ್ಟಿನಲ್ಲಿ ರೋಟರಿ ಕ್ಲಬ್‌ನ ಈ ಸೇವಾ ಕಾರ್ಯ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು.

## ರೋಟರಿ ಕಲಾ ಮಂದಿರದಲ್ಲಿ ವಿಶೇಷ ಚೇತನ ಮಕ್ಕಳ ವೈದ್ಯಕೀಯ ತಪಾಸಣಾ ಶಿಬಿರ – 130 ಮಕ್ಕಳಿಗೆ ಪ್ರಯೋಜನ




ರೋಟರಿ ಕ್ಲಬ್ ಕುಂದಾಪುರ ದಕ್ಷಿಣ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಕುಂದಾಪುರ ಇವರ ಸಂಯುಕ್ತ ಆಶ್ರಯದಲ್ಲಿ, ದಿನಾಂಕ 18, ಡಿಸೆಂಬರ್ 2025ರಂದು ನಗರದ ರೋಟರಿ ಕಲಾ ಮಂದಿರದಲ್ಲಿ "ವಿಶೇಷ ಚೇತನ ಮಕ್ಕಳ ವೈದ್ಯಕೀಯ ಮೌಲ್ಯಾಂಕನ ಹಾಗೂ ಆರೋಗ್ಯ ತಪಾಸಣಾ ಶಿಬಿರ"ವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಸಮಾಜಮುಖಿ ಕಾರ್ಯಕ್ರಮದ ನೇತೃತ್ವವನ್ನು ರೋಟರಿ ಕ್ಲಬ್ ಕುಂದಾಪುರ ದಕ್ಷಿಣದ ಅಧ್ಯಕ್ಷರಾದ ರೊ. ಸಚಿನ್ ನಕ್ಕತ್ತಾಯ ಅವರು ವಹಿಸಿದ್ದರು. ಕಾರ್ಯಕ್ರಮವನ್ನು ದೀಪ ಬೆಳಗುವ ಮೂಲಕ ಉದ್ಘಾಟಿಸಲಾಯಿತು. ವೇದಿಕೆಯಲ್ಲಿ ರೋಟರಿ ಕ್ಲಬ್ ಕುಂದಾಪುರ ದಕ್ಷಿಣದ ಕಾರ್ಯದರ್ಶಿ ರೊ. ಜೆರಾಲ್ಡ್ ಕ್ರಾಸ್ತಾ, ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಮಕ್ಕಳ ಆರೋಗ್ಯ ತಪಾಸಣೆಗಾಗಿ ಆಗಮಿಸಿದ ನುರಿತ ವೈದ್ಯಕೀಯ ತಜ್ಞರು ಉಪಸ್ಥಿತರಿದ್ದರು. ಈ ಶಿಬಿರದಲ್ಲಿ ತಾಲೂಕಿನ ಸುಮಾರು 130 ವಿಶೇಷ ಚೇತನ ವಿದ್ಯಾರ್ಥಿಗಳು ಪಾಲ್ಗೊಂಡು, ತಜ್ಞ ವೈದ್ಯರಿಂದ ಸೂಕ್ತ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಶಿಬಿರದ ಸದುಪಯೋಗ ಪಡೆದುಕೊಂಡರು. ಶಿಬಿರದಲ್ಲಿ ಭಾಗವಹಿಸಿದ ಎಲ್ಲಾ ಮಕ್ಕಳಿಗೆ, ಅವರ ಪೋಷಕರಿಗೆ ಹಾಗೂ ಸಿಬ್ಬಂದಿವರ್ಗದವರಿಗೆ ರೋಟರಿ ಕ್ಲಬ್ ವತಿಯಿಂದ ಬೆಳಗಿನ ಉಪಹಾರ ಹಾಗೂ ಮಧ್ಯಾಹ್ನದ ಊಟದ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಲಾಗಿತ್ತು. ರೋಟರಿ ಸಂಸ್ಥೆಯು ಶಿಕ್ಷಣ ಇಲಾಖೆಯ ಜೊತೆಗೂಡಿ ನಡೆಸಿದ ಈ ಸೇವಾ ಕಾರ್ಯವು ಅತ್ಯಂತ ಅರ್ಥಪೂರ್ಣವಾಗಿ ಮೂಡಿಬಂತು.

## ನಿವೇದಿತಾ ಪ್ರೌಢಶಾಲೆಯಲ್ಲಿ ಅದ್ದೂರಿ 'ಪ್ರತಿಭಾ ಕಾರಂಜಿ' – 400ಕ್ಕೂ ಹೆಚ್ಚು ವಿದ್ಯಾರ್ಥಿಗಳ ಸಂಭ್ರಮ




ಮಕ್ಕಳ ಸುಪ್ತ ಪ್ರತಿಭೆಗಳನ್ನು ಅನಾವರಣಗೊಳಿಸುವ ನಿಟ್ಟಿನಲ್ಲಿ, ರೋಟರಿ ಕ್ಲಬ್ ಕುಂದಾಪುರ ದಕ್ಷಿಣ ಹಾಗೂ ನಿವೇದಿತಾ ಪ್ರೌಢಶಾಲೆ ಬಸ್ರೂರು ಇವರ ಸಂಯುಕ್ತ ಆಶ್ರಯದಲ್ಲಿ ದಿನಾಂಕ 17ನೇ ನವೆಂಬರ್ 2025ರಂದು "ಪ್ರತಿಭಾ ಕಾರಂಜಿ" ಕಾರ್ಯಕ್ರಮವನ್ನು ಬಸ್ರೂರಿನ ನಿವೇದಿತಾ ಪ್ರೌಢಶಾಲೆಯಲ್ಲಿ ಅತ್ಯಂತ ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಕಾರ್ಯಕ್ರಮದಲ್ಲಿ ಶಾಲೆಯ ಸುಮಾರು 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅತ್ಯಂತ ಉತ್ಸಾಹದಿಂದ ಪಾಲ್ಗೊಂಡು ತಮ್ಮ ಕಲಾ ಪ್ರತಿಭೆಯನ್ನು ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಅತಿಥಿಗಳಿಗೆ ರೋಟರಿ ಕ್ಲಬ್ ವತಿಯಿಂದ ಬೆಳಗಿನ ಉಪಹಾರದ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಲಾಗಿತ್ತು. ಕಾರ್ಯಕ್ರಮದ ವಿಶೇಷವಾಗಿ, ಮಕ್ಕಳ ಪ್ರತಿಭೆಗೆ ಪ್ರೋತ್ಸಾಹ ನೀಡುತ್ತಾ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವ ರೋಟರಿ ಕ್ಲಬ್ ಅಧ್ಯಕ್ಷರಾದ ರೊ. ಸಚಿನ್ ನಕ್ಕತ್ತಾಯ ಅವರನ್ನು ಶಾಲಾ ಆಡಳಿತ ಮಂಡಳಿ ಹಾಗೂ ಶಿಕ್ಷಕ ವೃಂದದ ವತಿಯಿಂದ ಶಾಲು ಹೊದಿಸಿ, ಸ್ಮರಣಿಕೆ ನೀಡಿ ಆತ್ಮೀಯವಾಗಿ ಸನ್ಮಾನಿಸಲಾಯಿತು. ವೇದಿಕೆಯಲ್ಲಿ ರೋಟರಿ ಕ್ಲಬ್ ಕುಂದಾಪುರ ದಕ್ಷಿಣದ ಕಾರ್ಯದರ್ಶಿ ರೊ. ಜೆರಾಲ್ಡ್ ಕ್ರಾಸ್ತಾ, ಇಂಟರಾಕ್ಟ್ ಸಂಯೋಜಕರಾದ ಪ್ರದೀಪ್ ಶೆಟ್ಟಿ, ಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದದವರು ಹಾಗೂ ವಿವಿಧ ಸರಕಾರಿ ಅಧಿಕಾರಿಗಳು ಉಪಸ್ಥಿತರಿದ್ದು ಮಕ್ಕಳಿಗೆ ಶುಭ ಹಾರೈಸಿದರು. ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಪೂರಕವಾದ ಈ ಕಾರ್ಯಕ್ರಮವು ಸಾರ್ವಜನಿಕರ ಮತ್ತು ಪೋಷಕರ ಮೆಚ್ಚುಗೆಗೆ ಪಾತ್ರವಾಯಿತು.

## ಅನ್ನದಾತರೊಂದಿಗೆ ರೋಟರಿ ದೀಪಾವಳಿ – ರೈತರಿಗೆ 1000 ಮಣ್ಣಿನ ಹಣತೆಗಳ ವಿತರಣೆ




ಬೆಳಕಿನ ಹಬ್ಬ ದೀಪಾವಳಿಯ ಶುಭ ಸಂದರ್ಭದಲ್ಲಿ, ರೋಟರಿ ಕ್ಲಬ್ ಕುಂದಾಪುರ ದಕ್ಷಿಣದ ವತಿಯಿಂದ ರೈತರೊಂದಿಗೆ ಸೇರಿ ಹಬ್ಬವನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಯಿತು. ದಿನಾಂಕ 20ನೇ ಅಕ್ಟೋಬರ್ 2025ರಂದು (ದೀಪಾವಳಿ ದಿನ) ಹಮ್ಮಿಕೊಳ್ಳಲಾದ ಈ ಕಾರ್ಯಕ್ರಮದಲ್ಲಿ ಪರಿಸರ ಸಂರಕ್ಷಣೆಯ ಸಂದೇಶ ಸಾರುವ ನಿಟ್ಟಿನಲ್ಲಿ ರೈತರಿಗೆ ಸುಮಾರು 1000 ಮಣ್ಣಿನ ಹಣತೆಗಳನ್ನು ವಿತರಿಸಲಾಯಿತು.

ಈ ವಿಶೇಷ ಕಾರ್ಯಕ್ರಮದಲ್ಲಿ ಸುಮಾರು 50ಕ್ಕೂ ಹೆಚ್ಚು ರೈತರು ಪಾಲ್ಗೊಂಡಿದ್ದರು. ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಿದ 'ನಮ್ಮ ಭೂಮಿ' ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ಶ್ರೀನಿವಾಸ್ ಅವರು, ರೈತರಿಗೆ ಕೃಷಿ ಚಟುವಟಿಕೆಗಳು ಹಾಗೂ ಸಾವಯವ ಕೃಷಿಯ ಮಹತ್ವದ ಕುರಿತು ಅತ್ಯಂತ ಉಪಯುಕ್ತ ಮಾಹಿತಿಗಳನ್ನು ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಕುಂದಾಪುರ ದಕ್ಷಿಣದ ಅಧ್ಯಕ್ಷರಾದ ರೊ.



Rtn. Dr. S. N. Padiyar 1985-86 & 1986-87 | Rtn. B. Arun Kumar Shetty 1987-88 | Rtn. Dr. H. Rammohan 1988-89 | Rtn. K. Shridhar Kamath 1989-90 | Rtn. Dr. Anand Nayak 1990-91 | Rtn. B. Ramachandra Prabhu 1991-92 | Rtn. G. Santhosh Kumar Shetty 1992-93 | Rtn. Dr. H. A. Vishweshwar 1993-94 | Rtn. Dr. H. R. Hebbar 1994-95



Rtn. K. T. Surendranath 1995-96



Rtn. B. C. Somayaji 1997-98



Rtn. S. Subraya Halambi 1999-2000



Rtn. K. Seetharama Nackathaya 2001-02



Rtn. Dr. Umesh Puthran 2003-04



Rtn. A. Shantharam Pai 2005-06

ಸಚಿನ್ ನಕ್ಕತ್ತಾಯ ವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ರೈತರ ಬದುಕು ಹಸನಾಗಲಿ ಎಂದು ಹಾರೈಸಿದರು. ವೇದಿಕೆಯಲ್ಲಿ ರೋಟರಿ ಕ್ಲಬ್ ಕಾರ್ಯದರ್ಶಿ ರೊ. ಜೆರಾಲ್ಡ್ ಕ್ರಾಸ್ತಾ, ಮಹಾಗಣಪತಿ ಯುವಕ ಸಂಘದ ಪ್ರಸಾದ್ ಆಚಾರ್ಯ ಹಾಗೂ 'ನಮ್ಮ ಭೂಮಿ' ಸಂಸ್ಥೆಯ ಸಮಾಜ ಸೇವಕರಾದ ನರಸಿಂಹ ಅವರು ಉಪಸ್ಥಿತರಿದ್ದರು. ಗ್ರಾಮೀಣ ಭಾಗದ ರೈತರನ್ನು ಒಗ್ಗೂಡಿಸಿ, ಪರಿಸರ ಸ್ನೇಹಿ ದೀಪಾವಳಿಯನ್ನು ಆಚರಿಸಿದ ರೋಟರಿ ಕ್ಲಬ್‌ನ ಈ ನಡೆಗೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಮೆಚ್ಚುಗೆ ವ್ಯಕ್ತವಾಯಿತು.



The Transport and Endowment Minister Mr. Ramlinga Reddy and Member of Legislative Council of Govt. of Karnataka Mr. Manjunatha Bhandary felicitated by our Charter member Past President Rtn. Arun Kumar Shetty on the occasion of Shashti at Guddammady Subramanya Temple Senapura.

## ವಿವಾಹ ವಾರ್ಷಿಕೋತ್ಸವದ ಶುಭಾಶಯಗಳು



ತಾ. 03–01–2026ನೇ ಶನಿವಾರದಂದು ತಮ್ಮ ವಿವಾಹ ವಾರ್ಷಿಕೋತ್ಸವವನ್ನು ಆಚರಿಸಲಿರುವ
ರೊ. ರೇಗನ್ ಲೋಬೋ ಮತ್ತು ಆ್ಯನ್ ಪ್ರಿಸ್ಸಿಯಾ ಲೋಬೋರವರಿಗೆ ಕ್ಲಬ್ಬಿನ ಸದಸ್ಯರ ಪರವಾಗಿ ಶುಭಾಶಯಗಳು.
ಮೊಬೈಲ್ : 9901319947

## ಹುಟ್ಟುಹಬ್ಬದ ಶುಭಾಶಯಗಳು



ರೊ. ಅರುಣ್ ಕುಮಾರ್ ಶೆಟ್ಟಿ
ದಿನಾಂಕ : ಜನವರಿ 4
ಮೊಬೈಲ್ : 9880295366

## THE ROTARY 4-WAY TEST

1. Is it the truth?
2. Is it fair to all concerned?
3. Will it build goodwill and better friendships?
4. Will it be beneficial to all concerned?

*This Bulletin is sponsored by :*

**Rtn. Raghavendra Shet**
**Mob. : 9480266845**

For Private Circulation only

Email id – rotaryclub.kundapurasouth@gmail.com



Rtn. S. Sadananda Chatra 1996-97



Rtn. K. Suresh Kamath 1998-99



Rtn. S. Vijaya Shetty 2000-01



Rtn. U. S. Shenoy 2002-03




Rtn. Dr. B. V. Udupa 2004-05



Rtn. K. Shantharam Prabhu 2006-07



Rtn. T. Raghavendra Hatwar 2007-08 | Rtn. K. Shankar 2008-09 | Rtn. S. Jayakar Shetty 2009-10 | Rtn. K. K. Kanchan 2010-11 | Rtn. Abhinandan A. Shetty 2011-12 | Rtn. Vivian Crasto 2012-13 | Rtn. G. Shreedhar Shetty 2013-14 | Rtn. K. P. Bhat 2014-15 | Rtn. P. Vasudeva Karanth 2015-16



Rtn. Aouzline F. Rebello 2016-17 | Rtn. J. Srinath Rao 2017-18 | Rtn. Johnson D' Almeida 2018-19 | Rtn.Devaraj 2019-20 | Rtn. Dr. Uttam Kumar Shetty 2020-21 | Rtn.Mahendr Shetty 2021-22 | Rtn.Sathyanarayana Puranik 2022-23 | Rtn.Suresh Mallya 2023-24 | Rtn. Judith Mendonca 2024-25